**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ,**
**ಇವರ ಕಛೇರಿ ಪ್ರಕಟಣೆ ಅಧಿಸೂಚನೆ ಸಂಖ್ಯೆ: ಆಡಳಿತ ೦೩/೨೦೧೯,**
**ದಿನಾಂಕ: ೦೮-೦೧-೨೦೧೯.**

<u>ವಿಷಯ:</u> ದಾವಣಗೆರೆ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿಯಿರುವ **ಬೆರಳಚ್ಚು-ನಕಲುಗಾರರ** ಹುದ್ದೆಗಳನ್ನು **ನೇರ ನೇಮಕಾತಿ ಮೂಲಕ** ಭರ್ತಿ ಮಾಡುವ ಬಗ್ಗೆ.

<u>ಉಲ್ಲೇಖ:</u>
೧) ಸರ್ಕಾರಿ ಆದೇಶ ಸಂಖ್ಯೆ: **ಎಲ್.ಎ.ಡಬ್ಲ್ಯೂ** ೧೫೬ **ಎಲ್.ಎ.ಸಿ.** ೨೦೧೮ **ದಿನಾಕ:** ೦೭-೦೮-೨೦೧೮.
೨) ಗೌ. ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: **ಎಲ್.ಸಿ.ಎ-**೩೫/೧೨೮/೨೦೧೨, **ದಿನಾಕ:** ೧೮-೦೯-೨೦೧೮.
೩) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) ನೇಮಕಾತಿ ನಿಯಮಗಳು, ೧೯೮೨.
೪) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು, ೨೦೦೭.
೫) **ಈ ಕಛೇರಿ ಟಿಪ್ಪಣಿ ಮತ್ತು ಅದರ ಮೇಲಿನ ಆದೇಶ**

***********

ದಾವಣಗೆರೆ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ ೦೨ ಬೆರಳಚ್ಚು-**ನಕಲುಗಾರರ** ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ದಾವಣಗೆರೆ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/davangere/online-recruitment ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: ೧೬-೦೧-೨೦೧೯ ರಿಂದ ೧೫-೦೨-೨೦೧೯ ರ ರಾತ್ರಿ.೧೧.೫೯ ರ ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆ ಮತ್ತು ಇಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

**<u>ಹುದ್ದೆಗಳ ಸಂಖ್ಯೆ : ೨ (ಹಿಂಬಾಕಿ ಹುದ್ದೆಗಳು)</u>**

ವೇತನ ಶ್ರೇಣಿ: ರೂ.೨೧೪೦೦-೫೦೦-೨೨೪೦೦-೫೫೦-೨೪೬೦೦-೬೦೦-೨೭೦೦೦-೬೫೦-೨೯೬೦೦-೭೫೦-೩೨೬೦೦-೮೫೦-೩೬೦೦೦-೯೫೦-೩೯೮೦೦-೧೧೦೦-೪೨೦೦೦ ಮತ್ತು ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ ::

| ಕ್ರ. ಸಂ. | ಹುದ್ದೆ | ಹುದ್ದೆಗಳ ಸಂಖ್ಯೆ: | ಮೀಸಲಾತಿ | ಹುದ್ದೆಗಳ ವರ್ಗೀಕರಣ | ಒಟ್ಟು |
|---|---|---|---|---|---|
| | | | | ಸಾ.ಅ | |
| ೩ | ಬೆರಳಚ್ಚು-ನಕಲುಗಾರರು | ೦೨ | ಇತರೆ | ೧* | ೧ |
| | | | ಮಹಿಳೆ | | - |
| | | | ಗ್ರಾಮೀಣ | | - |
| | | | ಯೋ.ಅ | | - |
| | | | ಮಾ.ಸೈ. | ೧* | ೧ |
| | | | ಅಂ.ವಿ. | | - |
| | | | ಕ.ಮಾ. | | - |
| | ಒಟ್ಟು | | | ೨ | ೨ |

*** ಹಿಂಬಾಕಿ ಹುದ್ದೆಗಳು**

**# ದೃಷ್ಟಿಮಾಂದ್ಯ**

ಸಾ.ಅ. - ಸಾಮಾನ್ಯ ಅರ್ಹತೆ, ಪ.ಜಾ. - ಪರಿಶಿಷ್ಟ ಜಾತಿ, ಮಾ.ಸೈ.-ಮಾಜಿ ಸೈನಿಕ, ಕ.ಮಾ – ಕನ್ನಡ ಮಾಧ್ಯಮ, ಪ.ಪಂ. - ಪರಿಶಿಷ್ಟ ಪಂಗಡ.

ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಮಹಿಳೆ, ಅಂಗವಿಕಲ, ಗ್ರಾಮೀಣ, ಕನ್ನಡ ಮಾಧ್ಯಮ, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗದ ಅರ್ಹ ಇತರೆ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು.

ಟಿಪ್ಪಣಿ:

ಈ ಮೇಲಿನ ಹುದ್ದೆಗಳ ವರ್ಗೀಕರಣವನ್ನು ಈ ಕೆಳಗಿನ ಸರ್ಕಾರಿ ಆದೇಶಗಳನ್ನು ಅಧರಿಸಿ ವರ್ಗೀಕರಿಸಲಾಗಿದೆ.

೧) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೦೮ ಸೇನೆನಿ ೯೫ ದಿನಾಂಕ: ೨೦-೦೬-೧೯೯೫.
೨) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೫೩ ಸೇನೆನಿ ೨೦೦೭ ದಿನಾಂಕ: ೦೪-೦೧-೨೦೦೮.
೩) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ೧೨೮ ಸೇನೆನಿ ೨೦೦೬ ದಿನಾಂಕ: ೦೧-೦೮-೨೦೦೯.

ವಯೋಮಿತಿ:

| | | | |
|---|---|---|---|
| ಕನಿಷ್ಠ :- | ೧೮ ವರ್ಷಗಳು | | |
| ಗರಿಷ್ಠ :- | ಸಾಮಾನ್ಯ ವರ್ಗ | : | ೩೫ ವರ್ಷ |
| | ೨-ಎ, ೨-ಬಿ, ೩-ಬಿ | : | ೩೮ ವರ್ಷ |
| | ಪ.ಜಾ./ಪ.ಪಂ./ಪ್ರವರ್ಗ-೧ | : | ೪೦ ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಜೀತ ಕಾರ್ಮಿಕರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ಅರ್ಜಿಯನ್ನು **ಸಲ್ಲಿಸುವ** ಕೊನೆಯ ದಿನಾಂಕಕ್ಕೆ ಮೇಲ್ಕಂಡ ಕನಿಷ್ಟ ವಯೋಮಿತಿಯನ್ನು ಹೊಂದಿರತಕ್ಕದ್ದು ಮತ್ತು ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

ಟಿಪ್ಪಣಿಃ ಗರಿಷ್ಠ ವಯೋಮಿತಿಯ ಸೌಲಭ್ಯ ಕೋರುವ ಅಭ್ಯರ್ಥಿಯು ವಿಧವೆಯಾಗಿದ್ದರೆ, ಅವರು ವಿಧವೆಯೆಂಬ ಬಗ್ಗೆ ತಹಶೀಲ್ದಾರರ ದರ್ಜೆಗೆ ಕಡಿಮೆ ಅಲ್ಲದ ರೆವಿನ್ಯೂ ಪ್ರಾಧಿಕಾರಿಯಿಂದ ಪಡೆದ ಪ್ರಮಾಣ ಪತ್ರಗಳನ್ನು **ಹೊಂದಿರಬೇಕು.**

## ಶೈಕ್ಷಣಿಕ ವಿದ್ಯಾರ್ಹತೆಃ

೧) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.

೨) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಲಾದ ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲಿ ಜ್ಯೂನಿಯರ್ ದರ್ಜೆಯ ಬೆರಳಚ್ಚು ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿ ನಾಂಕದೊಳಗೆ ಉತ್ತೀರ್ಣರಾಗಿರತಕ್ಕದ್ದು.

## ಆಯ್ಕೆ ವಿಧಾನ :-

ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು ೧೯೮೨ ಹಾಗೂ (ತಿದ್ದುಪಡಿ) ನಿಯಮಗಳು ೨೦೦೭ ರ ಮೇರೆಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು.

ಈ ಕೆಳಗಿನಂತೆ ಅರ್ಹತಾ ಪರೀಕ್ಷೆಯನ್ನು ಮತ್ತು ಸಂದರ್ಶನವನ್ನು ನಡೆಸಿ ಆಯ್ಕೆ ಮಾಡಿಕೊಳ್ಳಲಾಗುವುದು.

೧) ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರು ೧೫ ನಿಮಿಷಗಳ ಕಾಲ ನೀಡುವ ಉಕ್ತ ಲೇಖನವನ್ನು ಬೆರಳಚ್ಚುಪಡಿಸತಕ್ಕದ್ದು.

೨) ಈ ಪರೀಕ್ಷೆಯು ಗರಿಷ್ಠ ೧೦೦ ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ ೫೦ ಅಂಕಗಳನ್ನು ಪಡೆಯತಕ್ಕದ್ದು.

೩) ಅರ್ಹತಾ ಪರೀಕ್ಷೆಯಲ್ಲಿ ಪಡೆದ ಶೇಕಡವಾರು ಅಂಕಗಳು, ಸಂದರ್ಶನದಲ್ಲಿ ಗಳಿಸುವ ಅಂಕಗಳು ಮತ್ತು ವಿದ್ಯಾರ್ಹತೆಯಲ್ಲಿ ಪಡೆದ ಶೇಕಡವಾರು ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## ನಿರೀಕ್ಷಣಾ ಅವಧಿ :-

ನೇಮಕ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣೆ) ನಿಯಮಗಳು ೧೯೭೭ರ ಪ್ರಕಾರ ಎರಡು ವರ್ಷಗಳ ಪರಿವೀಕ್ಷಣಾ ಅವಧಿಯಲ್ಲಿರತಕ್ಕದ್ದು ಮತ್ತು ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳನ್ನು ನಿಯಮದಡಿ ಗೊತ್ತುಪಡಿಸಿದ್ದರೆ ಅವುಗಳಲ್ಲಿ ಉತ್ತೀರ್ಣರಾಗಬೇಕು.

**<u>ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ ಃ-</u>**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದಅಧಿಸೂಚನೆಯೊಂದಿಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

**<u>ಅರ್ಜಿ ಸಲ್ಲಿಸುವ ವಿಧಾನ ಃ-</u>**

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ಅದನ್ನೂ ಸಹ ನಮೂದಿಸುವುದು. ಒಂದು ವೇಳೆ ಎಸ್‌ಎಂಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   - ಅ. ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ ೫ ಸೆ.ಮೀ. ಉದ್ದ ಥ ३.६ ಸೆ.ಮೀ. ಅಗಲವುಳ್ಳದ್ದಾಗಿರಬೇಕು ಮತ್ತು ೫೦ ಕೆ.ಬಿ. ಅಳತೆಯದ್ದಾಗಿರಬೇಕು ಹಾಗೂ ಅದು .೧೮೦ ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
   - ಆ. ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)
   - ಇ. ಅಭ್ಯರ್ಥಿಯ ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (೨.೫ ಸೆ.ಮೀ. ಉದ್ದ ಥ ೭.೫ ಸೆ.ಮೀ. ಅಗಲವುಳ್ಳದ್ದಾಗಿರಬೇಕು ಮತ್ತು ೨೫ ಕೆ.ಬಿ. ಅಳತೆಯದ್ದಾಗಿರಬೇಕು ಹಾಗೂ ಅದು .೧೮೦ ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

4. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡುವುದು ತದನಂತರ ಅರ್ಜಿಯ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯಃ ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

6. ಅರ್ಹ ಅಭ್ಯಥಿಗಳಿಗೆ ಎಸ್‌ಎಂಎಸ್ಃ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

7. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೆ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

8. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು/ ಸಲ್ಲಿಸಲು ದಿಃ ೧೫-೦೨-೨೦೧೮, ರಾತ್ರಿ೧೧.೫೯ ರ ವರೆಗೆ ಅವಕಾಶವಿರುತ್ತದೆ.

9. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಈ ಕೆಳಕಂಡ ಪ್ರಮಾಣಪತ್ರಗಳನ್ನು ನಿಗದಿತ ನಮೂನೆಯಲ್ಲಿ ಪಡೆದುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಹಾಜರುಪಡಿಸಬೇಕು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ, ತಪ್ಪಿದಲ್ಲಿ ಅಂತಹವರ ಮೀಸಲಾತಿಯನ್ನುಃ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

1. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ ಃ ವರ್ಗಾವಣೆ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ
2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-೧, ೨ಎ, ೨ಬಿ, ೩ಎ ಮತ್ತು ೩ಬಿ ಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ ಹಾಗೂ ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ)
3. ಕನ್ನಡ ಮಾಧ್ಯಮ / ಮಾಜಿ ಸೈನಿಕರು / ಯೋಜನಾ ನಿರಾಶ್ರಿತ ಸಂಬಂಧಿಸಿದಂತೆ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಂಬಂಧಿಸಿದ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರಗಳನ್ನು ಪಡೆದಿರುವುದು.
4. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದಿರುವುದು (ಮೀಸಲಾತಿ ಕೋರಿದ್ದಲ್ಲಿ).
5. ಅಂಗವಿಕಲತೆಯ ಕುರಿತು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
6. ಅಭ್ಯರ್ಥಿಯು ವಾಸವಾಗಿರುವ ಸ್ಥಳದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ. ಅದು ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕಕ್ಕೆ ೬ ತಿಂಗಳೊಳಗೆ ಪಡೆದದ್ದಿರಬೇಕು. ಅದಕ್ಕಿಂತಲೂ ಹಿಂದಿನದಾಗಿದ್ದರೆ ತಿರಸ್ಕರಿಸಲಾಗುವುದು.
7. ಶಾಲಾ ಮುಖ್ಯಸ್ಥರಿಂದ ಪಡೆದ ನಡತೆ ಪ್ರಮಾಣ ಪತ್ರ.
8. ಅಭ್ಯರ್ಥಿಯು ಭಾರತೀಯ ನಾಗರೀಕನಲ್ಲದಿದ್ದಲ್ಲಿ ಜಿಲ್ಲಾಧಿಕಾರಿ/ಜಿಲ್ಲಾ ದಂಡನಾಧಿಕಾರಿಯವರು ನೀಡಿರುವ ನಾಗರೀಕ ದೃಢೀಕರಣ ಪತ್ರ.
9. ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕದೊಳಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

10. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನದ ಬಗ್ಗೆ ಮಾಹಿತಿ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

11. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

12. ಅಭ್ಯರ್ಥಿ ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

13. ಪರಿಶೀಲನೆ ಮಾಡುವಾಗ ಅಭ್ಯರ್ಥಿಯು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಹಾಗೂ ಹಾಜರುಪಡಿಸಿದ ದಾಖಲಾತಿಗಳು ಖೊಟ್ಟಿ (ಜಿಚಿಞಜ) ಎಂದು ಕಂಡುಬಂದಲ್ಲಿ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

14. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**(ಕುಲಕರ್ಣಿ ಅಂಬಾದಾಸ್ ಜಿ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.

ಅಭ್ಯರ್ಥಿಯು ಸರ್ಕಾರಿ ನೌಕರನಾಗಿದ್ದ ಪಕ್ಷದಲ್ಲಿ ನೇಮಕಾತಿ ಪ್ರಾಧಿಕಾರಗಳ ದೃಢೀಕರಣ ಪತ್ರ

ಶ್ರೀ/ಶ್ರೀಮತಿ ------------------- ಇವರು ನಮ್ಮ ಇಲಾಖೆಯಲ್ಲಿ -----------ಹುದ್ದೆಯಲ್ಲಿ ದಿನಾಂಕ:------------ ರಿಂದ ಸೇವೆ ಸಲ್ಲಿಸುತ್ತಿದ್ದು, ಅಭ್ಯರ್ಥಿಯ ನಡತೆಯು ಉತ್ತಮವಾಗಿದ್ದು ------------------ ಹುದ್ದೆಗೆ ಅರ್ಹರಿರುತ್ತಾರೆ ಮತ್ತು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರ ಅಧಿಸೂಚನೆ ಸಂಖ್ಯೆ: ೦೩/೨೦೧೮ ರಡಿ ಆಹ್ವಾನಿಸಿರುವ--------------------ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.

ಸ್ಥಳ : ಪ್ರಾಧಿಕಾರದ ಸಹಿ
ದಿನಾಂಕ: